# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 541 |
| ಸದಸ್ಯರ ಹೆಸರು | : | ಡಾ. ಉಮಾಶ್ರೀ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 14.08.2025 |
| ಉತ್ತರಿಸಬೇಕಾದ ಸಚಿವರು | : | ಉಪ ಮುಖ್ಯಮಂತ್ರಿ |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ವತಿಯಿಂದ ನಿರ್ಮಾಣವಾದ 2ನೇ ಬ್ಲಾಕ್‌ನ ಸರ್.ಎಂ. ವಿಶೇಶ್ವರಯ್ಯ ಬಡಾವಣೆಯಲ್ಲಿ ಆಸ್ಪತ್ರೆಗಾಗಿ ಬೆಂಗಳೂರು ಮಹಾನಗರ ಪಾಲಿಕೆಗೆ ಸಿ.ಎ ನಿವೇಶನ ಹಂಚಿಕೆ ಮಾಡಲಾಗಿದೆಯೇ; ಈ ನಿವೇಶನಕ್ಕೆ ಬಿ.ಡಿ.ಎ ಪಡೆದ ಒಟ್ಟು ಮೊತ್ತವೆಷ್ಟು; ಬೆಂಗಳೂರು ಮಹಾನಗರ ಪಾಲಿಕೆಯು ಈ ಮೊತ್ತವನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಪಾವತಿಸಿದೆಯೇ? | ಹೌದು<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಒಟ್ಟಾರೆ ಗುತ್ತಿಗೆ ಮೌಲ್ಯ ರೂ. 1,71,70,290/- ಗಳನ್ನು ಪಾವತಿಸಲಾಗಿರುತ್ತದೆ. |
| (ಆ) | ಈ ನಿವೇಶನವನ್ನು ಯಾವ ವರ್ಷದಲ್ಲಿ ಹಂಚಿಕೆ ಮಾಡಲಾಯಿತು; ಸದರಿ ನಿವೇಶನವನ್ನು ಬೆಂಗಳೂರು ಮಹಾನಗರ ಪಾಲಿಕೆಗೆ ನೋಂದಣಿ ಮಾಡಿಕೊಂಡಿದೆಯೇ; | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ದಿನಾಂಕ:06.01.2011ರಂದು ಸದರಿ ನಾಗರೀಕ ಸೌಲಭ್ಯ ನಿವೇಶನದ ಹಂಚಿಕೆ ಪತ್ರವನ್ನು ನೀಡಲಾಗಿರುತ್ತದೆ.<br>ದಿನಾಂಕ:22.07.2025 ರಂದು 30 ವರ್ಷಗಳ ಅವಧಿಗೆ ಗುತ್ತಿಗೆ ಕರಾರು ಪತ್ರವನ್ನು ನೊಂದಾಯಿಸಲಾಗಿರುತ್ತದೆ. |
| (ಇ) | ಈ ವಲಯದಲ್ಲಿ ಸರ್ಕಾರಿ ಆಸ್ಪತ್ರೆ ಇಲ್ಲದಿರುವುದರಿಂದ ಸಾರ್ವಜನಿಕರು ಖಾಸಗಿ ಆಸ್ಪತ್ರೆಗಳ ಮೊರೆ ಹೋಗುತ್ತಿರುವುದು ಸರ್ಕಾರದ ಗಮನಕ್ಕಿದೆಯೇ; | ಸರ್.ಎಂ.ವಿಶ್ವೇಶ್ವರಯ್ಯ ಬಡಾವಣೆಯಿಂದ 1.5 ರಿಂದ 02 ಕಿ.ಮೀ ದೂರದಲ್ಲಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ನಮ್ಮ ಕ್ಲಿನಿಕ್ ಲಭ್ಯವಿರುತ್ತದೆ.<br>ದಿನಾಂಕ: 22.07.2025 ರಂದು ನಾಗರೀಕ ಸೌಲಭ್ಯ ನಿವೇಶನದ ಗುತ್ತಿಗೆ ಕರಾರು ಪತ್ರವನ್ನು ನೋಂದಾಯಿಸಲಾಗಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ಆಸ್ಪತ್ರೆ ನಿರ್ಮಾಣ ಮಾಡಲು ಕ್ರಮವಹಿಸಲಾಗುವುದು. |
| (ಈ) | ಅತಿ ಹೆಚ್ಚು ಆರ್ಥಿಕವಾಗಿ ಹಿಂದುಳಿದ ಸಮುದಾಯಗಳೇ ಇರುವ ವಲಯಕ್ಕೆ ಆಸ್ಪತ್ರೆಗೆ ನಿವೇಶನ ಇದ್ದರೂ ಆಸ್ಪತ್ರೆ ನಿರ್ಮಾಣ ಮಾಡಲು ಸರ್ಕಾರ ವಿಳಂಭ ನೀತಿ ಏಕೆ ಅನುಸರಿಸುತ್ತಿದೆ? | |

**ಸಂಖ್ಯೆ: ನಅಇ 523 ಬೆಂಭೂಸ್ವಾ 2025**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ